## ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 747**
**ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್. ಕೆ**
**(ವಿಧಾನ ಸಭೆಯಿಂದ ಚುನಾಯಿತರಾದವರು**
**ಉತ್ತರಿಸಬೇಕಾದ ದಿನಾಂಕ : 13.03.2025.**
**ಉತ್ತರಿಸುವ ಸಚಿವರು : ಗೃಹ ಸಚಿವರು**

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ವಿವಿಧ ಕಾರಾಗೃಹದಲ್ಲಿರುವ ಹಲವಾರು ವಿಚಾರಣಾಧೀನ ಖೈದಿಗಳು ಹಾಗೂ ಸಜಾ ಬಂದಿಗಳು ಜೈಲು ಒಳಗಿನಿಂದಲೇ ಅವಿರತವಾಗಿ ಅಕ್ರಮ ಚಟುವಟಿಕೆಗಳನ್ನು ನಡೆಸುತ್ತಾ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು;<br><br>ಈ ರೀತಿಯ ಕೆಲವು ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| (ಆ) | ಬಂದಿದ್ದಲ್ಲಿ, ಆರೋಪಿಗಳು ಹಾಗೂ ರೌಡಿಗಳ ಜೊತೆಗೆ ಖೈದಿಗಳು ನಿರಂತರ ಸಂಪರ್ಕದಲ್ಲಿದ್ದುಕೊಂಡು ಅಪರಾಧ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುತ್ತಿದ್ದು, ಇದನ್ನು ತಡೆಯಲು ಸರ್ಕಾರ ಇದುವರೆಗೆ ಯಾವುದೇ ಕಠಿಣ ಕ್ರಮಗಳನ್ನು ಕೈಗೊಳ್ಳಲು ವಿಫಲವಾಗಿರುವುದಕ್ಕೆ ಕಾರಣಗಳೇನು; | ರಾಜ್ಯದ ಕಾರಾಗೃಹಗಳಲ್ಲಿ ಬಂದಿಗಳು ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗದಂತೆ ಈಗಾಗಲೇ ಈ ಕೆಳಕಂಡಂತೆ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲಾಗಿರುತ್ತದೆ:-<br><br>➢ ಸರ್ಕಾರದ ಸುತ್ತೋಲೆ ಸಂಖ್ಯೆ: ಹೆಚ್‌ಡಿ 03 ಪಿಆರ್‌ಎ 2010, ದಿನಾಂಕ: 22.03.2010ರಲ್ಲಿ ರಾಜ್ಯದ ಎಲ್ಲಾ ಕಾರಾಗೃಹಗಳಲ್ಲಿ ನಿಷೇಧಿತ ವಸ್ತುಗಳ ಬಳಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆಯ ವತಿಯಿಂದ ಅನಿರೀಕ್ಷಿತ ತಪಾಸಣೆಗಳನ್ನು ನಡೆಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿರುತ್ತದೆ.<br><br>➢ ಸರ್ಕಾರದ ಅಧಿಸೂಚನೆ ಸಂಖ್ಯೆ: ಹೆಚ್‌ಡಿ 187 ಪಿಆರ್‌ಎ 2021, ದಿನಾಂಕ: 28.03.2022ರಲ್ಲಿ ಕಾರಾಗೃಹಗಳಲ್ಲಿ ಬಂದಿಗಳು ಮೊಬೈಲ್ ಫೋನ್‌ಗಳು, ಎಲೆಕ್ಟ್ರಾನಿಕ್ಸ್ ಸಾಧನಗಳು ಮತ್ತು ನಿಷೇಧಿತ ವಸ್ತುಗಳ ಬಳಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ, ಸೂಕ್ತ ಕಾನೂನು ಕ್ರಮಗಳನ್ನು ಜರುಗಿಸುವ ಸಂಬಂಧ, ಕರ್ನಾಟಕ ಕಾರಾಗೃಹಗಳ ನಿಯಮಗಳು-1974ರ ನಿಯಮ 42(3)ರಲ್ಲಿನ ನಿಷೇಧಿತ ವಸ್ತುಗಳ ಪಟ್ಟಿಗೆ, ಕರ್ನಾಟಕ ಕಾರಾಗೃಹ (ತಿದ್ದುಪಡಿ) ನಿಯಮಗಳು-2022ರಂತೆ ಅವಶ್ಯಕ ತಿದ್ದುಪಡಿಯನ್ನು ಮಾಡಲಾಗಿರುತ್ತದೆ. ನಿಷೇಧಿತ ವಸ್ತುಗಳ |

| | | |
|---|---|---|
| | | ಪಟ್ಟಿಗೆ ಸದರಿ ವಸ್ತುಗಳನ್ನು ಸೇರ್ಪಡೆಗೊಳಿಸಿ ಆದೇಶ ಹೊರಡಿಸಲಾಗಿದ್ದು, ಅದರನ್ವಯ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br>➢ ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 09 ಶಾಸನ 2022, ದಿನಾಂಕ: 05.04.2022ರಲ್ಲಿ ಕಾರಾಗೃಹಗಳಲ್ಲಿ ಬಂದಿಗಳು ಮೊಬೈಲ್ ಫೋನ್‌ಗಳು, ಎಲೆಕ್ಟ್ರಾನಿಕ್ ಸಾಧನಗಳು ಮತ್ತು ನಿಷೇಧಿತ ವಸ್ತುಗಳ ಬಳಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ, ಸೂಕ್ತ ಕಾನೂನು ಕ್ರಮವನ್ನು ಜರುಗಿಸುವ ಸಂಬಂಧ ಕರ್ನಾಟಕ ಬಂದೀಖಾನೆಗಳ ಅಧಿನಿಯಮ, 1963ರ ಕಲಂ 42ಕ್ಕೆ, ಕರ್ನಾಟಕ ಬಂದೀಖಾನೆಗಳ (ತಿದ್ದುಪಡಿ) ಅಧಿನಿಯಮ-2022ರಲ್ಲಿ, ಅವಶ್ಯಕ ತಿದ್ದುಪಡಿಯನ್ನು ಮಾಡಲಾಗಿದ್ದು, ಅದರನ್ವಯ ಮೂರು ವರ್ಷಗಳಿಗೆ ಕಡಿಮೆ ಇಲ್ಲದ ಆದರೆ ಐದು ವರ್ಷಗಳಿಗೆ ವಿಸ್ತರಿಸಬಹುದಾದ ಶಿಕ್ಷೆ ಮತ್ತು ಜುಲ್ಮಾನೆಯಿಂದ ದಂಡನೆಗೆ ಒಳಪಡಿಸಲಾಗುತ್ತಿದೆ.<br>➢ ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 37 ಪಿಆರ್‌ಎ 2022, ದಿನಾಂಕ: 17.03.2022ರಲ್ಲಿ ರಾಜ್ಯದ ಕಾರಾಗೃಹಗಳಲ್ಲಿ ಮೊಬೈಲ್ ಫೋನ್ ಗಳು ಮತ್ತು ಇತರೆ ಯಾವುದೇ ರೀತಿಯ ನಿಷೇಧಿತ ವಸ್ತುಗಳ ಕಳ್ಳ ಸಾಗಣಿಕೆಯನ್ನು ಮತ್ತು ಅಪರಾಧ ಚಟುವಟಿಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಸಂಬಂಧಪಟ್ಟ ಪೊಲೀಸ್ ಆಯುಕ್ತರು / ಜಿಲ್ಲಾ ಪೊಲೀಸ್ ಅಧೀಕ್ಷಕರುಗಳು ಹಾಗೂ ಕಾರಾಗೃಹಗಳ ಮುಖ್ಯ ಅಧೀಕ್ಷಕರು / ಅಧೀಕ್ಷಕರುಗಳಿಗೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಅಗತ್ಯ ನಿರ್ದೇಶನಗಳನ್ನು ನೀಡಲಾಗಿದ್ದು, ಅದರನ್ವಯ, ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿರುತ್ತದೆ. |
| (ಇ) | ಮೊಬೈಲ್ ಫೋನ್‌ಗಳನ್ನು ಅಕ್ರಮವಾಗಿ ಬಳಸಿ ಜೈಲಿನಿಂದಲೇ ಹಣಕ್ಕಾಗಿ ಬೇಡಿಕೆ ಹಾಕುತ್ತಿರುವುದು, ಕೊಲೆ ಬೆದರಿಕೆ ಹಾಗೂ ಡ್ರಗ್ಸ್ ಮಾರಾಟಕ್ಕೆ ಸಂಚು ರೂಪಿಸುವುದರ ಜೊತೆಗೆ ಎಲ್ಲಾ ರೀತಿಯ ಕಾನೂನು ಬಾಹಿರ ಚಟುವಟಿಕೆಗಳನ್ನು ನಡೆಸುತ್ತಿರುವುದನ್ನು ತಡೆಯಲು ಸರ್ಕಾರ ಯಾವ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವುದು? | ಕಾರಾಗೃಹದಲ್ಲಿ ಬಂದಿಗಳು ಮೊಬೈಲ್ ಹಾಗೂ ನಿಷೇಧಿತ ವಸ್ತುಗಳನ್ನು ಬಳಸದಂತೆ ಹಾಗೂ ಅಕ್ರಮ ಚಟುವಟಿಕೆಗಳಲ್ಲಿ ತೊಡಗದಂತೆ ಈ ಕೆಳಕಂಡ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ:-<br>➢ ರಾಜ್ಯದ ಕೇಂದ್ರ ಕಾರಾಗೃಹಗಳಾದ ಬೆಂಗಳೂರು, ಮೈಸೂರು, ಬೆಳಗಾವಿ, ಬಳ್ಳಾರಿ, ಧಾರವಾಡ, ವಿಜಯಪುರ, ಕಲಬುರ್ಗಿ, ಶಿವಮೊಗ್ಗ ಮತ್ತು ಮಂಗಳೂರು ಜಿಲ್ಲಾ ಕಾರಾಗೃಹಕ್ಕೆ ಈಗಾಗಲೇ ಕೆ.ಎಸ್.ಐ.ಎಸ್.ಎಫ್. ಸಿಬ್ಬಂದಿಗಳನ್ನು ಕಾರಾಗೃಹದ |

| | | |
|---|---|---|
| | | ಮುಖ್ಯದ್ವಾರದಲ್ಲಿ ಹಾಗೂ ಹೊರ ವೃತ್ತದ ವಿಭಾಗಗಳಲ್ಲಿ ಭದ್ರತೆ ತಪಾಸಣೆ ಹಾಗೂ ಗಸ್ತು ನಿರ್ವಹಣೆ ಕರ್ತವ್ಯಕ್ಕೆ ನಿಯೋಜಿಸಲಾಗಿದ್ದು, ಉಳಿದ ಕಾರಾಗೃಹಗಳ ಮುಖ್ಯದ್ವಾರದಲ್ಲಿ ಸದರಿ ಸಿಬ್ಬಂದಿಯವರಿಂದ ಕಾರಾಗೃಹಕ್ಕೆ ಆಗಮಿಸುವ ಮತ್ತು ನಿರ್ಗಮಿಸುವ ಸಿಬ್ಬಂದಿ / ವ್ಯಕ್ತಿಗಳನ್ನು ಭದ್ರತಾ ಉಪಕರಣಗಳನ್ನು ಬಳಸಿಕೊಂಡು ತಪಾಸಣೆ ಮಾಡಲಾಗುತ್ತಿದೆ ಹಾಗೂ ಸಂಸ್ಥೆಗೆ ಬರುವ ಎಲ್ಲಾ ಸಾಮಗ್ರಿಗಳನ್ನು ಬ್ಯಾಗೇಜ್ ಸ್ಕ್ಯಾನರ್ ಮೂಲಕ ಹಾಗೂ ಸಿಬ್ಬಂದಿಗಳಿಂದ ಭೌತಿಕವಾಗಿ ತಪಾಸಣೆಯನ್ನು ಕೈಗೊಳ್ಳಲಾಗುತ್ತಿದೆ.<br><br>➢ ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ ಅಳವಡಿಸಿರುವ 280 ಸಂಖ್ಯೆ ಸಿಸಿಟಿವಿ ಕ್ಯಾಮರಾಗಳಿಗೆ ಅತ್ಯಾದುನಿಕ AI-Powered Audio-Video Analytics System ಕಣ್ಗಾವಲು ವ್ಯವಸ್ಥೆಯನ್ನು 2025ನೇ ಫೆಬ್ರವರಿ ಮಾಹೆಯಲ್ಲಿ ಅಳವಡಿಸಲಾಗಿದೆ.<br><br>➢ ಕೇಂದ್ರ ಸರ್ಕಾರದ "ಕಾರಾಗೃಹ ಆಧುನೀಕರಣ ಯೋಜನೆಯಡಿ" ಭದ್ರತೆ ಮತ್ತು ತಪಾಸಣೆಗಾಗಿ 09 ಸಂಖ್ಯೆ **X-ray Baggage Scanner** ಮತ್ತು ಸಂವಹನ ಸಲುವಾಗಿ 350 ಸಂಖ್ಯೆ Walkie Talkie ಗಳನ್ನು ಖರೀದಿಸಲು ಕ್ರಮವಹಿಸಲಾಗಿದೆ.<br><br>➢ ಬೆಂಗಳೂರು ಕಾರಾಗೃಹದಲ್ಲಿ ಮೊಬೈಲ್ ಫೋನ್ ಬಳಸುವುದನ್ನು ತಡೆಯುವ ಸಲುವಾಗಿ 03 ಸಂಖ್ಯೆ T-HCBS ಸ್ಥಾವರಗಳನ್ನು ಅಳವಡಿಸಲಾಗಿರುತ್ತದೆ.<br><br>➢ ರಾಜ್ಯದ ಕೇಂದ್ರ ಕಾರಾಗೃಹಗಳಾದ ಬೆಂಗಳೂರು, ಮೈಸೂರು, ಕಲಬುರ್ಗಿ, ಬೆಳಗಾವಿ, ಧಾರವಾಡ, ಬಳ್ಳಾರಿ ಮತ್ತು ಮಂಗಳೂರು ಜಿಲ್ಲಾ ಕಾರಾಗೃಹದಲ್ಲಿ ಅಳವಡಿಸಲಾಗಿರುವ 66 ಸಂಖ್ಯೆ ಮೊಬೈಲ್ ಜಾಮರ್‌ಗಳನ್ನು ದುರಸ್ತಿ ಮತ್ತು 2ಜಿಯಿಂದ 4ಜಿ/5ಜಿ ಗೆ ಮೇಲ್ದರ್ಜೆಗೇರಿಸಲು ಕ್ರಮ ಕೈಗೊಳ್ಳಲಾಗಿದ್ದು, ಈಗಾಗಲೇ ಬೆಂಗಳೂರು ಮತ್ತು ಬೆಳಗಾವಿ ಕೇಂದ್ರ ಕಾರಾಗೃಹಗಳಲ್ಲಿ ಜಾಮರ್‌ಗಳ ದುರಸ್ತಿ ಮತ್ತು ಮೇಲ್ದರ್ಜೆಗೇರಿಸುವ ಕಾರ್ಯ ಮುಕ್ತಾಯಗೊಂಡಿದ್ದು, Testing and Recalibration ಹಂತದಲ್ಲಿರುತ್ತದೆ. |

| | | |
|---|---|---|
| | | ➢ ಬೆಂಗಳೂರು ಕೇಂದ್ರ ಕಾರಾಗೃಹಕ್ಕೆ ಮಾದಕ ವಸ್ತುಗಳನ್ನು (Narcotics) ಪತ್ತೆ ಹಚ್ಚಲು 02 ಸಂಖ್ಯೆ Belgian Malinois ತಳಿಯ ಶ್ವಾನಗಳನ್ನು ಖರೀದಿಸಿ ಅವುಗಳಿಗೆ ತರಬೇತಿ ನೀಡಿ ಶ್ವಾನದಳ ಸ್ಥಾಪಿಸಲಾಗಿರುತ್ತದೆ.<br><br>➢ ಕಾರಾಗೃಹಗಳಲ್ಲಿ ಬಂದಿಗಳ ತಪಾಸಣೆ ಸಮಯದಲ್ಲಿ ಮೊಬೈಲ್ ಮತ್ತು ಇನ್ನಿತರ ನಿಷೇಧಿತ ವಸ್ತುಗಳು ಕಂಡುಬಂದಲ್ಲಿ ಅಂತಹವರ ವಿರುದ್ಧ ಕರ್ನಾಟಕ ಬಂದೀಖಾನೆಗಳ (ತಿದ್ದುಪಡಿ) ಅಧಿನಿಯಮ, 2022 ಕಲಂ 42 ರನ್ವಯ ಕ್ರಮವಹಿಸಲಾಗುತ್ತಿದೆ. ಈಗಾಗಲೇ ಅಂತಹವರ ವಿರುದ್ಧ ದಿನಾಂಕ: 05.04.2022 ರಿಂದ ದಿನಾಂಕ: 06.03.2025 ರವರೆಗೆ ಒಟ್ಟು 248 ಪ್ರಕರಣಗಳನ್ನು ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ದಾಖಲಿಸಲಾಗಿರುತ್ತದೆ.<br><br>➢ ಕಾರಾಗೃಹ ಅಧಿಕಾರಿ/ಸಿಬ್ಬಂದಿಗಳ ನೇತೃತ್ವದಲ್ಲಿ ತಂಡಗಳನ್ನು ರಚಿಸಿ ಪ್ರತಿನಿತ್ಯ ಬಂದಿಗಳನ್ನು ಹಾಗೂ ಬಂದಿಗಳ ಕೊಠಡಿಗಳನ್ನು ಅನಿರೀಕ್ಷಿತವಾಗಿ ತಪಾಸಣೆಗೆ ಒಳಪಡಿಸಲಾಗುತ್ತಿದೆ. |

ಸಂಖ್ಯೆ: ಹೆಚ್‌ಡಿ 74 ಪಿಆರ್‌ಎ 2025

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು